# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 975(754) |
| ಸದಸ್ಯರ ಹೆಸರು | : | ಶ್ರೀ ಸುನಿಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 27.12.2022 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ಇರುವ ವಿಜಯಪುರ ಜಿಲ್ಲೆಯ ಬಬಲೇಶ್ವರ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಯು ಅವ್ಯವಹಾರ ನಡೆಸಿರುವುದು, ಅಧಿಕಾರ ದುರುಪಯೋಗ ಪಡಿಸಿಕೊಂಡಿರುವುದು ಹಾಗೂ ಸದರಿ ಅಧಿಕಾರಿಯ ವಿರುದ್ಧ ಸಾರ್ವಜನಿಕರಿಂದ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ವಿಜಯಪುರ ಜಿಲ್ಲೆಯ ಬಬಲೇಶ್ವರ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಯಾಗಿರುವ ಶ್ರೀ ಡಿ.ಎನ್.ತಹಶೀಲ್ದಾರ್(ಮೂಲ ಹುದ್ದೆ ಪ್ರಥಮ ದರ್ಜೆ ಸಹಾಯಕ) ಇವರು ಈ ಹಿಂದೆ ನಿಡಗುಂದಿ ಪಟ್ಟಣ ಪಂಚಾಯಿತಿಯಲ್ಲಿ ಮುಖ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಅವಧಿಯಲ್ಲಿ ನಡೆಸಿದ ಭ್ರಷ್ಟಾಚಾರ ಮತ್ತು ಕರ್ತವ್ಯಲೋಪಗಳ ಕುರಿತು ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ ಇವರಿಂದ ಶಿಸ್ತು ಪ್ರಸ್ತಾವನೆಯು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯದಿಂದ ಸ್ವೀಕೃತವಾಗಿರುತ್ತದೆ.<br><br>ಜಿಲ್ಲಾಧಿಕಾರಿಗಳ ಶಿಸ್ತು ಪ್ರಸ್ತಾವನೆಯನ್ನು ಆಧರಿಸಿ ಪೌರಾಡಳಿತ ನಿರ್ದೇಶನಾಲಯದಿಂದ ಶ್ರೀ.ಡಿ.ಎನ್. ತಹಶೀಲ್ದಾರ್, (ಮೂಲ ಹುದ್ದೆ ಪ್ರಥಮ ದರ್ಜೆ ಸಹಾಯಕ) ಇವರ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಜಾರಿಗೊಳಿಸಿ, ಪ್ರಕರಣದ ಸತ್ಯಾಸತ್ಯತೆ ಪರಾಮರ್ಶೆಗಾಗಿ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪೌರಾಡಳಿತ ನಿರ್ದೇಶನಾಲಯದ ದಿ:20.05.2022 ರ ಆದೇಶದಲ್ಲಿ ನಿವೃತ್ತ ನ್ಯಾಯಾಧೀಶರನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಿಸಲಾಗಿದೆ, ವಿಚಾರಣಾಧಿಕಾರಿಗಳು ವಿಚಾರಣೆಯನ್ನು ಪೂರ್ಣಗೊಳಿಸಿ ವಿಚಾರಣಾ ವರದಿಯನ್ನು ಶಿಸ್ತು ಪ್ರಾಧಿಕಾರವಾದ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಇವರಿಗೆ ದಿನಾಂಕ:12.12.2022 ರಂದು ಸಲ್ಲಿಸಿರುತ್ತಾರೆ. ಸದರಿ ವಿಚಾರಣಾ ವರದಿಯನ್ನು ಲಗತ್ತಿಸಿ ಆಪಾದಿತರಿಗೆ 2ನೇ ಕಾರಣ ಕೇಳುವ ನೋಟಿಸನ್ನು ದಿನಾಂಕ 14.12.2022ರಂದು ಜಾರಿ ಮಾಡಲಾಗಿದೆ. ಅವರಿಂದ ಲಿಖಿತ ಸಮಜಾಯಿಷಿ ಪಡೆದು ಶಿಸ್ತು ಪ್ರಾಧಿಕಾರವು ನಿಯಮಾನುಸಾರ ಪರಿಶೀಲಿಸಿ ಕ್ರಮ ವಹಿಸಲಾಗುವುದು. |

| | | |
|---|---|---|
| (ಆ) | ಸದರಿ ಅಧಿಕಾರಿಯ ಮೇಲೆ ಇರುವ ದೂರುಗಳು ಯಾವುವು? (ವಿವರ ನೀಡುವುದು). | ವಿಜಯಪುರ ಜಿಲ್ಲೆಯ ನಿಡಗುಂದಿ ಪಟ್ಟಣ ಪಂಚಾಯಿತಿಯ ಹಿಂದಿನ ಮುಖ್ಯಾಧಿಕಾರಿ ಶ್ರೀ.ಡಿ.ಎನ್. ತಹಶೀಲ್ದಾರ್, (ಮೂಲ ಹುದ್ದೆ ಪ್ರಥಮ ದರ್ಜೆ ಸಹಾಯಕ) ಇವರು 2019-20ನೇ ಸಾಲಿನ 14ನೇ ಹಣಕಾಸು ಯೋಜನೆಯಡಿ ಮಂಜೂರಾದ ಕ್ರಿಯಾ ಯೋಜನೆಯಲ್ಲಿ ವಾರ್ಡ್ ನಂ.02 ರಲ್ಲಿ ಬರುವ ಭೀಮಾಶಂಕರ ಗುಡಿಯಿಂದ ನಾಗಠಾಣರವರ ಮನೆವರೆಗೆ ಸಿ.ಸಿ.ರಸ್ತೆ ನಿರ್ಮಾಣ ಮಾಡುವುದಾಗಿ ಕಾಮಗಾರಿಗೆ ಅನುಮೋದನೆ ಪಡೆದುಕೊಂಡಿದ್ದು ಪ್ರಸ್ತಾಪಿತ ಕಾಮಗಾರಿ ನಿರ್ವಹಿಸದೆ ಆರೋಪಿತ ಅಧಿಕಾರಿಯು "ಶಹನೂರ ಪೆಂಡಾರಿ ಅವರ ಮನೆಯಿಂದ ಮಸೂತಿಯವರ ಮನೆಯವರೆಗೆ ಹಾಗೂ ಕಮಟಗಿರವರ ಮನೆಯಿಂದ ಹತ್ತರಕಿಹಾಳರವರ ಕಂಪೌಂಡವರೆಗೆ ಸಿ.ಸಿ.ರಸ್ತೆ ನಿರ್ಮಾಣ ಮಾಡಿ, ಸದರಿ ಬದಲಾದ ಕಾಮಗಾರಿಯ ಕ್ರಿಯಾ ಯೋಜನೆಗೆ ಸಕ್ಷಮ ಪ್ರಾಧಿಕಾರದಿಂದ ಮಂಜೂರಾತಿಯನ್ನು ಪಡೆದುಕೊಳ್ಳದೆ ಕಾಮಗಾರಿ ನಿರ್ವಹಣೆ ಮಾಡಿ ಬಿಲ್ ಪಾವತಿಸಿ ಕರ್ತವ್ಯಲೋಪ ಎಸಗಿರುತ್ತಾರೆ ಎಂಬುದಾಗಿ ವಿಜಯಪುರ ಜಿಲ್ಲಾಧಿಕಾರಿಗಳು ದಿ:24.09.2021 ರಂದು ನಿರ್ದೇಶನಾಲಯಕ್ಕೆ ವರದಿ ಮಾಡಿರುತ್ತಾರೆ. |
| (ಇ) | ಸದರಿ ಅಧಿಕಾರಿಯ ವಿರುದ್ಧ ಯಾವ ತನಿಖೆಯನ್ನು ಕೈಗೊಳ್ಳಲಾಗಿದೆ. (ತನಿಖೆಯ ವರದಿಯ ಪ್ರತಿ ನೀಡುವುದು). | 1957 ರ ಕೆಸಿಎಸ್ (ಸಿಸಿಎ) ನಿಯಮಾವಳಿಗಳ ನಿಯಮ 11(2) ರಡಿ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ವಿಚಾರಣಾಧಿಕಾರಿಗಳನ್ನಾಗಿ ನಿವೃತ್ತ ಜಿಲ್ಲಾ ನ್ಯಾಯಾಧೀಶರನ್ನು ನೇಮಿಸಲಾಗಿದೆ. ವಿಚಾರಣಾಧಿಕಾರಿಗಳು ವಿಚಾರಣೆಯನ್ನು ಪೂರ್ಣಗೊಳಿಸಿ ದಿನಾಂಕ:12.12.2022 ರಂದು ಶಿಸ್ತು ಪ್ರಾಧಿಕಾರಕ್ಕೆ ವಿಚಾರಣಾ ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ವಿಚಾರಣಾ ವರದಿಯ ಆಧಾರದ ಮೇಲೆ ಆರೋಪಿತ ಅಧಿಕಾರಿಗೆ 2ನೇ ಕಾರಣ ಕೇಳುವ ನೋಟಿಸನ್ನು ದಿನಾಂಕ 14.12.2022ರಂದು ಜಾರಿ ಮಾಡಲಾಗಿದೆ. ಸದರಿಯವರು ಸಲ್ಲಿಸುವ ಲಿಖಿತ ಹೇಳಿಕೆಯನ್ನು ಪರಿಶೀಲಿಸಿ ಶಿಸ್ತು ಪ್ರಾಧಿಕಾರವು ನಿಯಮಾನುಸಾರ ಕ್ರಮ ವಹಿಸಲಾಗುವುದು. |
| ಈ) | ಭ್ರಷ್ಟಾಚಾರ ಎಸಗಿರುವ ಸದರಿ ಅಧಿಕಾರಿಯ ವಿರುದ್ಧ ಯಾವ ಕಾಲಮಿತಿಯಲ್ಲಿ ಶಿಸ್ತು ಕ್ರಮ ಜರುಗಿಸಲಾಗುವುದು? (ವಿವರ ನೀಡುವುದು) | ಆಪಾದಿತ ನೌಕರರಿಗೆ ವಿಚಾರಣಾ ವರದಿಯ ಮೇಲೆ 15 ದಿನಗಳೊಳಗಾಗಿ ಲಿಖಿತ ಸಮಜಾಯಿಷಿಯನ್ನು ಸಲ್ಲಿಸುವಂತೆ 2ನೇ ಕಾರಣ ಕೇಳಿ ನೋಟೀಸ್ ಜಾರಿ ಮಾಡಲಾಗಿದೆ. ಸದರಿಯವರು ಸಲ್ಲಿಸುವ ಲಿಖಿತ ಹೇಳಿಕೆಯನ್ನು ಪರಿಶೀಲಿಸಿ ಶಿಸ್ತು ಪ್ರಾಧಿಕಾರವು ನಿಯಮಾನುಸಾರ ಕ್ರಮ ವಹಿಸಲಾಗುವುದು |

..3

| | | |
|---|---|---|
| ಉ) | ಈ ಅಧಿಕಾರಿಯನ್ನು ಇದುವರೆಗೂ ಅಮಾನತ್ತು ಅಥವಾ ವರ್ಗಾವಣೆ ಮಾಡದಿರಲು ಕಾರಣವೇನು? | ದೂರನ್ನು ಸ್ವೀಕರಿಸಿದ ನಂತರ ಕ್ರಮ ವಹಿಸಿ ನಿವೃತ್ತ ಜಿಲ್ಲಾ ನ್ಯಾಯಾಧೀಶರನ್ನು ವಿಚಾರಣಾ ಅಧಿಕಾರಿಯನ್ನಾಗಿ ದಿನಾಂಕ **20.05.2022** ರಂದು ನೇಮಿಸಿ, ತ್ವರಿತವಾಗಿ ವಿಚಾರಣಾ ವರದಿಯನ್ನು ದಿನಾಂಕ **12.12.2022**ರಲ್ಲಿ ಪಡೆದು ಆಪಾದಿತರಿಗೆ 2ನೇ ಕಾರಣ ಕೇಳುವ ನೋಟಿಸನ್ನು ದಿನಾಂಕ **14.12.2022**ರಂದು ಜಾರಿಮಾಡಲಾಗಿದೆ. ಅವರ ಲಿಖಿತ ಸಮಜಾಯಿಷಿಯನ್ನು ಪಡೆದು ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲಾಗುವುದು. |

ಸಂಖ್ಯೆ:ನಅಇ **10** ಎಲ್‌ಸಿಕ್ಯೂ **2022**

(ಎನ್.ನಾಗರಾಜು ಎಂ.ಟಿ.ಬಿ)
ಪೌರಾಡಳಿತ, ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ
ವಲಯ ಉದ್ಯಮಗಳ ಸಚಿವರು.